**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/6/ಇಎಸ್‌ಟಿ(1)ಎ/2018-19(ಭಾಗ)

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ: 17-05-2018

**ಹಿಂಬರಹ**

**ವಿಷಯ :** ಸಿವಿಲ್ ಅಪೀಲು ಸಂಖ್ಯೆ: 2368/2011 - ಶ್ರೀ ಬಿ.ಕೆ. ಪವಿತ್ರ ಮತ್ತು ಮತ್ತಿತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಂತೆ ಹಿಂಬಡ್ತಿ / ಮುಂಬಡ್ತಿ ಹೊಂದಿರುವ ಅಧಿಕಾರಿಗಳು ಸ್ಥಳಬದಲಾವಣೆ ಕೋರಿರುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/098/ಟಿಪಿಇ/2018, ದಿನಾಂಕ: 17.04.2018.

2. ನಿರ್ದೇಶನಾಲಯದ ಅಧಿಕೃತ ಜ್ಞಾಪನ ಸಂಖ್ಯೆ: ಡಿಟಿಇ/5/ಇಎಸ್‌ಟಿ(1)ಎ/2018-19, ದಿನಾಂಕ: 17.04.2018.

3. ಮುಂಬಡ್ತಿ ಹೊಂದಿರುವ ಅಧಿಕಾರಿ / ಸಿಬ್ಬಂದಿಗಳು ಸ್ಥಳ ಬದಲಾವಣೆ ಕೋರಿ ಇಲಾಖೆಯಲ್ಲಿ ಸ್ವೀಕೃತವಾಗಿರುವ ಮನವಿಗಳಂತೆ.

*****

ಸಿವಿಲ್ ಅಪೀಲು ಸಂಖ್ಯೆ: 2368/2011 - ಬಿ.ಕೆ. ಪವಿತ್ರ ಮತ್ತಿತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಮತ್ತು ಇತರೆ ಸಿವಿಲ್ ಅಪೀಲುಗಳಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 09.02.2017 ರಂದು ನೀಡಿರುವ ತೀರ್ಪಿನನ್ವಯ ಹಾಗೂ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆದೇಶ ಮತ್ತು ಸುತ್ತೋಲೆಗಳನ್ವಯ ರಚಿಸಲಾದ ತಾಂತ್ರಿಕ ಶಿಕ್ಷಣ ಇಲಾಖೆಯ ಸೇವೆಗೆ ಸೇರಿದ ಅಧಿಕಾರಿ / ಸಿಬ್ಬಂದಿಗಳ ಅಂತಿಮ ಪರಿಷ್ಕೃತ ಜೇಷ್ಠತಾ ಪಟ್ಟಿಯಂತೆ ಅಧಿಕಾರಿ / ಸಿಬ್ಬಂದಿಗಳಿಗೆ ಹಿಂಬಡ್ತಿ / ಮುಂಬಡ್ತಿಗಳನ್ನು ನೀಡಿ ಆದೇಶಿಸಲಾಗಿದೆ. ಸದರಿ ಆದೇಶಗಳಂತೆ ಹಿಂಬಡ್ತಿ / ಮುಂಬಡ್ತಿ ಹೊಂದಿರುವ ಕೆಳಕಂಡ ಅಧಿಕಾರಿ / ಸಿಬ್ಬಂದಿಗಳಿಗೆ ಹಿಂಬಡ್ತಿ / ಮುಂಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಿರುವ ಸ್ಥಳ ಬದಲಾವಣೆ ಕೋರಿರುವ ಪ್ರಸ್ತಾವನೆಗಳು ಉಲ್ಲೇಖ(3) ರಂತೆ ಇಲಾಖೆಯಲ್ಲಿ ಸ್ವೀಕೃತಗೊಂಡಿರುತ್ತವೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿದೆ.

| ಕ್ರ.ಸಂ. | ಸ್ಥಳ ಬದಲಾವಣೆ ಕೋರಿ ಪ್ರಸ್ತಾವನೆ ಸ್ವೀಕೃತವಾಗಿರುವ ಅಧಿಕಾರಿ / ಸಿಬ್ಬಂದಿಯವರ ಹೆಸರು ಮತ್ತು ಪದನಾಮ |
|---|---|
| 1. | ಶ್ರೀಮತಿ ಮೀರಾಬಾಯಿ ಎಸ್.<br>ಪ್ರಾಂಶುಪಾಲರು ಗ್ರೇಡ್-1 / ಮುಖ್ಯ ಗ್ರಂಥಪಾಲಕರು,<br>ಸ್ಪೆರಿಕ್, ಬೆಂಗಳೂರು |
| 2. | ಶ್ರೀ ಬಿ.ಎಲ್.ಗೋವಿಂದರಾಜ್ ಸಿಂಗ್<br>ಆಯ್ಕೆಶ್ರೇಣಿ ಉಪನ್ಯಾಸಕರು, ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು. |
| 3. | ಶ್ರೀ ಎನ್.ಎಸ್.ಕುಮಾರ್<br>ಆಯ್ಕೆಶ್ರೇಣಿ ಉಪನ್ಯಾಸಕರು, ಸರ್ಕಾರಿ ಪಾಲಿಟೆಕ್ನಿಕ್, ತುಮಕೂರು |
| 4. | ಶ್ರೀ ಮಹಮದ್ ತಜಮುಲ್ ಹುಸೇನ್<br>ಆಯ್ಕೆಶ್ರೇಣಿ ಉಪನ್ಯಾಸಕರು, ಸರ್ಕಾರಿ ಪಾಲಿಟೆಕ್ನಿಕ್, ತುಮಕೂರು |
| 5. | ಶ್ರೀ ಹನುಮಂತರಾಯ ಕೆ.<br>ಆಯ್ಕೆಶ್ರೇಣಿ ಉಪನ್ಯಾಸಕರು, ಸರ್ಕಾರಿ ಪಾಲಿಟೆಕ್ನಿಕ್, ತುಮಕೂರು |

...2/-

ಸಿವಿಲ್ ಅಪೀಲು ಸಂಖ್ಯೆ: 2368/2011 – ಬಿ.ಕೆ. ಪವಿತ್ರ ಪ್ರಕರಣದಂತೆ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹಿಂಬಡ್ತಿ / ಮುಂಬಡ್ತಿ ಆದೇಶಗಳನ್ನು ಹೊರಡಿಸಲಾಗಿದ್ದು, ಸದರಿ ಆದೇಶಗಳನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸುವ ಸಂಬಂಧ ಈಗಾಗಲೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಇಲ್ಲಿಗೆ ವರದಿಯನ್ನು ಸಲ್ಲಿಸಲಾಗಿದೆ. ಈ ಹಿನ್ನೆಲೆಯಲ್ಲಿ ಉಲ್ಲೇಖ(1) ಮತ್ತು (2) ರಂತೆ ಹಿಂಬಡ್ತಿ / ಮುಂಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಸ್ಥಳವನ್ನು ಮಾರ್ಪಾಡು ಮಾಡಲಾಗುವುದಿಲ್ಲ ಎಂಬ ಅಂಶವನ್ನು ಸಂಬಂಧಪಟ್ಟ ಅಧಿಕಾರಿ / ಸಿಬ್ಬಂದಿಗಳ ಗಮನಕ್ಕೆ ತರಲಾಗಿದೆ. ಹಿಂಬಡ್ತಿ / ಮುಂಬಡ್ತಿ ಹೊಂದಿರುವ ಅಧಿಕಾರಿ / ಸಿಬ್ಬಂದಿಗಳು ನಿಯಮಾನುಸಾರ ಹಿಂಬಡ್ತಿ / ಮುಂಬಡ್ತಿ ಹುದ್ದೆಯಲ್ಲಿ ಕಾರ್ಯವರದಿ ಮಾಡಿ ಇಲಾಖೆಗೆ ವರದಿ ಸಲ್ಲಿಸಲು ಸೂಚಿಸಲಾಗಿದೆ.

**ನಿರ್ದೇಶಕರು,**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

**ಗೆ:-**

ಮೇಲ್ಕಂಡ ಅಧಿಕಾರಿ / ಸಿಬ್ಬಂದಿಗಳಿಗೆ ಸಂಬಂಧಪಟ್ಟ ಪ್ರಾಂಶುಪಾಲರ ಮುಖಾಂತರ

**ಪ್ರತಿ:-**

1. ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ;
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು);
3. ಕಛೇರಿ ಪ್ರತಿ.